ಸಂಖ್ಯೆ:ಪಿ.ಎಸ್.ಆರ್(04)/ಪಿಆರ್/64/2020-2021 ದಿನಾಂಕ:01-05-2020

## -: ಪತ್ರಿಕಾ ಪ್ರಕಟಣೆ :-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ COVID-19 ವೈರಾಣು ಸೋಂಕು ಪ್ರಕರಣಗಳು ದಾಖಲಾಗುತ್ತಿರುವ ಹಿನ್ನಲೆಯಲ್ಲಿ, I.L.I / SARI / ಇತರೆ ತೀವ್ರ ರೀತಿಯ ಆರೋಗ್ಯ ಸಮಸ್ಯೆಯನ್ನು ಹೊಂದಿರುವ ವ್ಯಕ್ತಿಗಳನ್ನು ಮುಂಚಿತವಾಗಿ ಗುರುತಿಸಿ ಕೋವಿಡ್-19 ಸೋಂಕಿನಿಂದ ಉಂಟಾಗಬಹುದಾದ ವೈದ್ಯಕೀಯ ಸಂಕೀರ್ಣತೆಯಿಂದ ಅವರನ್ನು ರಕ್ಷಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಪಾಲಿಕೆ ವ್ಯಾಪ್ತಿಯ ಎಲ್ಲಾ 198 ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ಕುಟುಂಬಗಳ ಸಾರ್ವತ್ರಿಕ ಸಮೀಕ್ಷೆಯನ್ನು ನಡೆಸಲು ಬೂತ್ ಮಟ್ಟದ ಮತಗಟ್ಟೆ ಮಟ್ಟದ ಅಧಿಕಾರಿಗಳ, ಸರ್ಕಾರಿ / ಅನುದಾನಿತ / ಖಾಸಗಿ ಮತ್ತು ಬಿಬಿಎಂಪಿ ಶಾಲೆಗಳ ಶಿಕ್ಷಕರನ್ನೊಳಗೊಂಡ "Health Survey Team (HST)" ತಂಡವನ್ನು ರಚಿಸಲಾಗಿರುತ್ತದೆ.

ಸದರಿ ತಂಡಗಳಿಗೆ ದಿನಾಂಕ:02-05-2020 ರಂದು 27 ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯ ವಿವಿಧ ಸ್ಥಳಗಳಲ್ಲಿ ತರಬೇತಿಯನ್ನು ಏರ್ಪಡಿಸಲಾಗಿದ್ದು, ತರಬೇತಿ ಆದೇಶವನ್ನು ಈಗಾಗಲೇ ಕ್ಷೇತ್ರ ಶಿಕ್ಷಣ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಪಾಲಿಕೆಯ ವಿದ್ಯಾಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳು / ಸಹಾಯಕ ಕಂದಾಯ ಅಧಿಕಾರಿಗಳು ಮುಖೇನ ಜಾರಿ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು, "Health Survey Team (HST)" ಗೆ ನಿಯೋಜಿಸಲಾಗಿರುವ ಬೂತ್ ಮಟ್ಟದ ಮತಗಟ್ಟೆ ಮಟ್ಟದ ಅಧಿಕಾರಿಗಳ, ಸರ್ಕಾರಿ / ಅನುದಾನಿತ / ಖಾಸಗಿ ಮತ್ತು ಬಿಬಿಎಂಪಿ ಶಾಲೆಗಳ ಶಿಕ್ಷಕರ ಆದೇಶಗಳನ್ನು ಪಾಲಿಕೆಯ ಅಂತರ್ಜಾಲ www.bbmp.gov.in ದಲ್ಲಿ ಪ್ರಚುರಪಡಿಸಲಾಗಿದ್ದು, ಸಂಬಂಧಪಟ್ಟ ಬೂತ್ ಮಟ್ಟದ ಮತಗಟ್ಟೆ ಮಟ್ಟದ ಅಧಿಕಾರಿಗಳ, ಸರ್ಕಾರಿ / ಅನುದಾನಿತ / ಖಾಸಗಿ ಮತ್ತು ಬಿಬಿಎಂಪಿ ಶಾಲೆಗಳ ಶಿಕ್ಷಕರುಗಳು ಪರಿಶೀಲಿಸಿ, ತರಬೇತಿಗೆ ನಿಯೋಜಿಸಿರುವ ಸ್ಥಳದಲ್ಲಿ ಕಡ್ಡಾಯವಾಗಿ ಹಾಜರಾಗಿ, ಕೋವಿಡ್-19 ಅನ್ನು ನಿರ್ಮೂಲನೆ ಮಾಡುವ ಸಲುವಾಗಿ, ಪಾಲಿಕೆಯೊಂದಿಗೆ ಕೈಜೋಡಿಸಲು ಈ ಮೂಲಕ ಕೋರಿದೆ ಹಾಗೂ ತರಬೇತಿಗೆ ಹಾಜರಾದ ಸಂಧರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಪಾಡುವುದು.

ಒಂದು ವೇಳೆ ತರಬೇತಿಗೆ ಹಾಜರಾಗದ ಬೂತ್ ಮಟ್ಟದ ಮತಗಟ್ಟೆ ಮಟ್ಟದ ಅಧಿಕಾರಿಗಳ, ಸರ್ಕಾರಿ / ಅನುದಾನಿತ / ಖಾಸಗಿ ಮತ್ತು ಬಿಬಿಎಂಪಿ ಶಾಲೆಗಳ ಶಿಕ್ಷಕರುಗಳ ವಿರುದ್ಧ ಸಾಂಕ್ರಮಿಕ ರೋಗ ನಿಯಂತ್ರಣ ಕಾಯ್ದೆ, 1897 ರನ್ವಯ ಕ್ರಮ ಜರುಗಿಸಲಾಗುವುದು.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner